## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## <u>ಗೊಟ್ಟಿಗೆರೆ ವಾರ್ಡ್ ಸಂಖ್ಯೆ-194,</u>

## <u>ವಾರ್ಡ್ ಕಛೇರಿಯಲ್ಲಿ ದಿನಾಂಕ: 04-10-2021 ರಂದು ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.</u>

| ಹಾಜರಿದ್ದವರು |
| --- |
| 1. ಅಧ್ಯಕ್ಷರು, ಗೊಟ್ಟಿಗೆರೆ, ವಾರ್ಡ್ ಸಮಿತಿ, ಬೊಮ್ಮನಹಳ್ಳಿ, ಬೆಂಗಳೂರು.<br>2. ಹಿರಿಯ ಆರೋಗ್ಯ ಪರಿವೀಕ್ಷಕರು ಹಾಗೂ ಕಾರ್ಯದರ್ಶಿ, ವಾರ್ಡ್ ನಂ.194, ಗೊಟ್ಟಿಗೆರೆ.<br>3. ಸಹಾಯಕ ಕಾರ್ಯಪಾಲಕ ಅಭಿಯಂತರರು (ಬೆಸ್ಕಾಂ), ಗೊಟ್ಟಿಗೆರೆ.<br>4. ಸಹಾಯಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ)<br>5. ವಾರ್ಡ್ ಸಹಾಯಕ ಅಭಿಯ್ಯಂತರರು ವಾರ್ಡ್ ನಂ.194, ಗೊಟ್ಟಿಗೆರೆ<br>6. ತೋಟಗಾರಿಕೆ. ಪರಿವೀಕ್ಷಕರು ಬೊಮ್ಮನಹಳ್ಳಿ ವಲಯ ಬಿಬಿ ಎಂ ಪಿ<br>7. ಪಶು ಇಲಾಖೆ ಪರಿವೀಕ್ಷಕರು ಬೊಮ್ಮನಹಳ್ಳಿ ವಲಯ ಬಿ ಬಿ ಎಂ ಪಿ<br><u>ಸ್ಥಳೀಯ ಸಂಘ ಸದಸ್ಯರು:-</u><br>1. ಅಧ್ಯಕ್ಷರು, ಪರಿವರ್ತನ ಸಂಘ, ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್, ಗೊಟ್ಟಿಗೆರೆ.<br>2. ಅಧ್ಯಕ್ಷರು, ಕ್ಲಾಸಿಕ್ ಆರ್ಚರ್ಡ್ಸ್, ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್, ಗೊಟ್ಟಿಗೆರೆ. |

ದಿನಾಂಕ: 04-10-2021 ರಂದು ಮಧ್ಯಾಹ್ನ 03:30 ಘಂಟೆಗೆ ನಡೆಸಲಾದ ವಾರ್ಡ್ ಸಮಿತಿ ಸಭೆಯಲ್ಲಿ ಅಧ್ಯಕ್ಷರು ರವರು ಸಭೆಯಲ್ಲಿ ಎಲ್ಲರನ್ನು ಸ್ವಾಗತಿಸುತ್ತಾ, ಸಭೆಯಲ್ಲಿ ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಲಾಯಿತು.

1. **ಕೋವಿಡ್-19 ಸಂಬಂಧ ಸೋಂಕು ಹರಡುವುದನ್ನು ತಡೆಗಟ್ಟುವ ಸಂಬಂಧ ತೆಗೆದುಕೊಳ್ಳಬೇಕಾದ ಮುಂಜಾಗ್ರತ ಬಗ್ಗೆ.**

    (i) ವಾರ್ಡ್ ವ್ಯಾಪ್ತಿಯಲ್ಲಿ ಒಟ್ಟು 14 ಕೋವಿಡ್ ಪ್ರಕರಣಗಳು ಕಂಡುಬಂದಿದ್ದು, ವಾರ್ಡ್ ವ್ಯಾಪ್ತಿಯಲ್ಲಿ ಒಟ್ಟು 6 ಪರೀಕ್ಷಾ ತಂಡಗಳು ಕೊಳೆಗೇರಿ ಹಾಗೂ ಮೈಕ್ರೋ ಕಂಟೈನ್‌ಮೆಂಟ್ 01 ಪ್ರದೇಶಗಳಲ್ಲಿ ತಪಾಸಣೆ ಮಾಡುತ್ತಿರುವ ಬಗ್ಗೆ ಸಭೆಗೆ ತಿಳಿಸಿದರು.

    (ii) ವಾರ್ಡ್ ವ್ಯಾಪ್ತಿಯಲ್ಲಿ 45 ವರ್ಷ ಮೇಲ್ಪಟ್ಟ ಸಾರ್ವಜನಿಕರಲ್ಲಿ 1ನೇ ಡೋಸ್ ಶೇ: 79% ಹಾಗೂ 2ನೇ ಡೋಸ್ ಶೇ: 92% ವ್ಯಾಕ್ಸಿನೇಷನ್ ಪೂರ್ಣಗೊಂಡಿದ್ದು, 18 ರಿಂದ 44 ವಯಸ್ಸುಳ್ಳ ಸಾರ್ವಜನಿಕರಲ್ಲಿ 1ನೇ ಡೋಸ್ ಶೇ: 43% ಹಾಗೂ 2ನೇ ಡೋಸ್ ಶೇ: 45% ವ್ಯಾಕ್ಸಿನೇಷನ್ ಕಾರ್ಯವು ಪೂರ್ಣಗೊಂಡಿರುತ್ತದೆ. ಅರ್ಹ ಸಾರ್ವಜನಿಕರು ಲಸಿಕೆಯನ್ನು ಪಡೆಯಲು ಕೋರಲಾಯಿತು.

2. ಘನತ್ಯಾಜ್ಯ ನಿರ್ವಹಣೆಯ ಬಗ್ಗೆ.

    (I) ಹೆಚ್.ಎಮ್. ವರ್ಲ್ಡ್ ಸಿಟಿ ಸುತ್ತಮುತ್ತಲಿನ ಘನತ್ಯಾಜ್ಯ ಎಸೆಯುವುದನ್ನು ತಡೆಗಟ್ಟುವುದು ಹಾಗೂ ಘನತ್ಯಾಜ್ಯವನ್ನು ಸ್ವಚ್ಛತೆಯನ್ನು ಸ್ವಚ್ಛತೆಗೊಳಿಸಲು ಕೋರಿದ್ದು, ಆರೋಗ್ಯ ಪರಿವೀಕ್ಷಕರಿಗೆ ಅಗತ್ಯ ಕ್ರಮ ವಹಿಸಲು ಸೂಚಿಸಲಾಯಿತು.

    (II) ವೆಂಕಟೇಶ್ವರ ಬಡಾವಣೆಯಲ್ಲಿ ಬ್ಲಾಕ್ ಸ್ಪಾಟ್ಸ್ ತೆರವುಗೊಳಿಸಲು ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಲಾಯಿತು.

3. ವಾರ್ಡ್ ವ್ಯಾಪ್ತಿಯಲ್ಲಿ ವಿದ್ಯುತ್ ಸರಬರಾಜು ಸಂಬಂಧಿಸಿದ ವಿಷಯಗಳ ಬಗ್ಗೆ.

    (I) ಹಿಮಗಿರಿ ಮೆಡೋಸ್ ಬಡಾವಣೆಯಲ್ಲಿ ದುರಸ್ಥಿಗೊಳಿಸಿದ್ದ ವಿದ್ಯುತ್ ಟ್ರಾನ್ಸ್‌ಫಾರ್ಮರ್ ಪುನಃ ದುರಸ್ಥಿಗೊಂಡಿದ್ದು, ಇದನ್ನು ಸರಿಪಡಿಸಲು ಹಾಗೂ ವಿದ್ಯುತ್ ತಂತಿಗಳನ್ನು ಸರಿಪಡಿಸಲು ಸಹಾಯಕ ಕಾರ್ಯಪಾಲಕ ಅಭಿಯಂತರರು (ಬೆಸ್ಕಾಂ) ರವರಿಗೆ ಸೂಚಿಸಲಾಯಿತು.

    (II) ಗೊಟ್ಟಿಗೆರೆ ಕೆರೆಯ ಸುತ್ತಮುತ್ತ ಸ್ಟ್ರೀಟ್ ಲೈಟ್ ಗಳನ್ನು ಅಳವಡಿಸಲು, ಸಹಾಯಕ ಕಾರ್ಯಪಾಲಕ ಅಭಿಯಂತರರು (ಬೆಸ್ಕಾಂ) ರವರಿಗೆ ಅಗತ್ಯ ಕ್ರಮ ವಹಿಸಲು ಸೂಚಿಸಲಾಯಿತು.

Scanned by CamScanner

4. ಬಿ.ಡಬ್ಲ್ಯೂ.ಎಸ್.ಎಸ್.ಬಿ ಸಂಬಂಧಿಸಿದ ವಿಷಯಗಳ ಬಗ್ಗೆ.

(I) ಸೌತ್ ಅವೆನ್ಯೂ, ಐ.ಡಿ.ಬಿ.ಐ, ಭಾಗ್ಯ ನಗರ ತಂಗುದಾಣ ದಿಂದ ಜಂಬುಸವಾರಿದಿನ್ನೆ ಹಾಗೂ ಪವಮಾನ ನಗರದಲ್ಲಿ ಒಳಚರಂಡಿ ನೀರು ಹಲವು ತಿಂಗಳುಗಳಿಂದ ಹುಕ್ಕಿಹರಿಯುತ್ತಿದ್ದು, ಹಲವು ಸಭೆಗಳಲ್ಲಿ ಸೂಚಿಸಿದ್ದರೂ ಸಹ ಈವರೆಗೂ ದುರಸ್ಥಿ ಕಾರ್ಯ ಕೈಗೊಂಡಿರುವುದು ಸರಿಯಿಲ್ಲವೆಂದು ವ್ಯಕ್ತಪಡಿಸುತ್ತಾ ಈ ವಾರದಲ್ಲಿಯೇ ದುರಸ್ಥಿಪಡಿಸಲು ಸಹಾಯಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) ಸೂಚಿಸಲಾಯಿತು.

5. ಮಳೆ ನೀರು, ಚರಂಡಿ ಕಾಮಗಾರಿ ಕುರಿತು.

(I) ಅಧ್ಯಕ್ಷರು, ಹಿಮಗಿರಿ ಮೆಡೋಸ್ ರವರು ಹಿಂದಿನ ಸಭೆಯಲ್ಲಿ ತಿಳಿಸಿಲಾಗಿದ್ದ ಒಳಚರಂಡಿ ಸ್ವಚ್ಛತೆ ಹಾಗೂ ಡಿಸಿಲ್ಟಿಂಗ್ ಕಾರ್ಯವು ಪೂರ್ಣಗೊಂಡಿರುವುದಿಲ್ಲ ಎಂದು ತಿಳಿಸಿದರು.

6. ರಸ್ತೆ ಕಾಮಗಾರಿ ಹಾಗೂ ರಸ್ತೆ ಪಾದಚಾರಿ ಬಗ್ಗೆ.

(I) ಹೆಚ್.ಎಮ್. ವರ್ಲ್ಡ್ ಸಿಟಿ ಸುತ್ತ ಮುತ್ತಲಿನ ರಸ್ತೆಗಳ potholes ಗಳನ್ನು ದುರಸ್ಥಿಪಡಿಸಲು ಕೋರಲಾಗಿದ್ದು, ವಾರ್ಡ್ ಅಭಿಯಂತರರು ಅಗತ್ಯ ಕ್ರಮ ವಹಿಸಲು ಸೂಚಿಸಲಾಯಿತು.

(II) ಹೆಚ್.ಎಮ್. ವರ್ಲ್ಡ್ ಸಿಟಿ ಉದ್ಯಾನವನದ ಗೇಟ್ ಹತ್ತಿರ ಮೆಟ್ರೋ ಕೇಬ್ಲಿಂಗ್ ಕಾರ್ಯಕ್ಕಾಗಿ ರಸ್ತೆಯನ್ನು ಅಗೆದಿದ್ದು, ಸದರಿ ಕಾರ್ಯದ ನಂತರ ರಸ್ತೆ ಗುಂಡಿಗಳನ್ನು ಮುಚ್ಚದೆಯಿರುವ ಬಗ್ಗೆ ತಿಳಿಸುತ್ತಾ, ಸದರಿ ಕಾರ್ಯವನ್ನು ಪೂರ್ಣಗೊಳಿಸಿಲು ಕೋರಿದ್ದು, ಸದರಿ ವಿಷಯದ ಬಗ್ಗೆ ವಾರ್ಡ್ ಅಭಿಯಂತರರಿಗೆ ಅಗತ್ಯ ಕ್ರಮ ವಹಿಸಲು ಸೂಚಿಸಲಾಯಿತು.

(III) ಹೆಚ್.ಎಮ್. ವರ್ಲ್ಡ್ ಸಿಟಿ ಸುತ್ತಮುತ್ತಲಿನಲ್ಲಿ ಸಿಸಿಟಿವಿ ಕ್ಯಾಮರಾಗಳನ್ನು ನಿವಾಸಿಗಳ ರಕ್ಷಣೆಗಾಗಿ ಅಳವಡಿಸಲು ಕೋರಿರುವ ಹಿನ್ನೆಲೆಯಲ್ಲಿ, ತಲಗಟ್ಟಪುರ ಪೊಲೀಸ್ ಠಾಣೆಯವರು 2-3 ಜಾಗೆಗಳನ್ನು ಗುರುತಿಸಿರುವ ಸಂಬಂಧ, ಸದರಿ ಕಾರ್ಯದ ಬಗ್ಗೆ ವಾರ್ಡ್ ಅಭಿಯಂತರರಿಗೆ ಅಗತ್ಯ ಕ್ರಮ ವಹಿಸಲು ಸೂಚಿಸಲಾಯಿತು.

(IV) ಜಂಬು ಸವಾರಿದಿನ್ನೆ ರಸ್ತೆಯಲ್ಲಿ ಹೊಸದಾಗಿ ವೃತ್ತದ ಕಾಮಗಾರಿಯ ಬಗ್ಗೆ ಚರ್ಚಿಸಲಾಗಿದ್ದು, ಸದರಿ ಕಾರ್ಯದ ಬಗ್ಗೆ ಅನುಪಾಲನಾ ವರದಿಯನ್ನು ಮುಂದಿನ ಸಭೆಯಲ್ಲಿ ಒದಗಿಸಲು ವಾರ್ಡ್ ಅಭಿಯಂತರರಿಗೆ ಸೂಚಿಸಲಾಯಿತು.

(V) ಕೃಷ್ಣವಿಹಾರ ಹತ್ತಿರ ಹಾಗೂ ವೀವರ್ಸ್ ಕಾಲೋನಿ ಹೋಗುವ ಮುಖ್ಯ ರಸ್ತೆಯ ಪಾದಚಾರಿಯ ಮೇಲೆ ವ್ಯಾಪಾರಸ್ಥರು ಮರುಕಳಿಸಿದ್ದು, ಸದರಿ ವ್ಯಾಪಾರಸ್ಥರನ್ನು ಪಾದಚಾರಿಯ ಮೇಲೆ ಮರುಕಳಿಸದಂತೆ ಅಗತ್ಯ ಕ್ರಮ ವಹಿಸಲು ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಲಾಯಿತು.

**ಈ ಮೇಲೆ ತಿಳಿಸಿರುವ ಎಲ್ಲಾ ವಿಷಯು / ಸಮಸ್ಯೆಗಳ ಬಗ್ಗೆ ನಿಯಮಾನುಸಾರ ಅಗತ್ಯ ಕ್ರಮ ವಹಿಸಲು ಹಾಗೂ ಮುಂದಿನ ಸಭೆಗೆ ಅನುಪಾಲನಾ ವರದಿಯೊಂದಿಗೆ ಸಂಬಂಧಪಟ್ಟ ಅಧಿಕಾರಿಗಳು ಹಾಜರಾಗಲು ಸೂಚಿಸುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.**

ಕಾರ್ಯದರ್ಶಿಗಳು
ಹಾಗೂ ಹಿರಿಯ ಆರೋಗ್ಯ ಪರಿವೀಕ್ಷಕರು
ವಾರ್ಡ್ ಸಂಖ್ಯೆ: 194, ಗೊಟ್ಟಿಗೆರೆ.

ಪ್ರತಿಯನ್ನು:-

1. ಮಾನ್ಯ ಆಯುಕ್ತರು ರವರ ಅವಗಾಹನೆಗೆ ಸಲ್ಲಿಸಲು ಆಪ್ತ ಕಾರ್ಯಾಲಯಕ್ಕೆ ಸಲ್ಲಿಸಿದೆ.
2. ಜಂಟಿ ಆಯುಕ್ತರು (ಬೊಮ್ಮನಹಳ್ಳಿ) ರವರ ಅವಗಾಹನೆಗೆ ಸಲ್ಲಿಸಿದೆ.
3. ಉಪ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ಸಲ್ಲಿಸಿದೆ.
4. ಮುಖ್ಯ ಅಭಿಯಂತರರು (ಬೊಮ್ಮನಹಳ್ಳಿ) ರವರ ಅವಗಾಹನೆಗೆ ಸಲ್ಲಿಸಿದೆ.
5. ಅಧೀಕ್ಷಕ ಅಭಿಯಂತರರು (ಬೊಮ್ಮನಹಳ್ಳಿ) ರವರ ಅವಗಾಹನಗೆ ಸಲ್ಲಿಸಿದೆ.
6. ಕಾರ್ಯಪಾಲಕ ಅಭಿಯಂತರರು, ಬಿಬಿಎಂಪಿ, ಗೊಟ್ಟಿಗೆರೆ ರವರಿಗೆ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, ಃಫಋ , ಗೊಟ್ಟಿಗೆರೆ ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸದೆ.

Scanned by CamScanner

8. ಸಹಾಯಕ ನಿರ್ದೇಶಕರು (ಪಶುಪಾಲನೆ), ಗೊಟ್ಟಿಗೆರೆ ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸದೆ.
9. ಕಾರ್ಯಪಾಲಕ ಅಭಿಯಂತರರು, ವಿದ್ಯುತ್ (ಬೊಮ್ಮನಹಳ್ಳಿ) ವಲಯ ಬಿಬಿಎಂಪಿ.
10. ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ.
11. ಕಾರ್ಯಪಾಲಕ ಅಭಿಯಂತರರು, ರಸ್ತೆ ಮತ್ತು ಮೂಲಭೂತ ಸೌಕರ್ಯಗಳು, ಬಿಬಿಎಂಪಿ
12. ಕಾರ್ಯಪಾಲಕ ಅಭಿಯಂತರರು, ಕೆರೆಗಳ ವಿಭಾಗ ಬಿಬಿಎಂಪಿ.
13. ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ವಿಭಾಗ ಬಿಬಿಎಂಪಿ.
14. ತೋಟಗಾರಿಕೆ ಅಧೀಕ್ಷಕರು, ಬೊಮ್ಮನಹಳ್ಳಿ ವಲಯ.
15. ಆರೋಗ್ಯ ವೈದ್ಯಾಧಿಕಾರಿಗಳು, ಬೊಮ್ಮನಹಳ್ಳಿ ವಲಯ.
16. ಆರೋಗ್ಯ ವೈದ್ಯಾಧಿಕಾರಿಗಳು, ಪ್ರಾಥಮಿಕ ಆರೋಗ್ಯ ಕೇಂದ್ರ.
17. ಸಹಾಯಕ ಕಾರ್ಯಪಾಲಕ ಅಭಿಯಂತರರು ಘನತ್ಯಾಜ್ಯ ನಿರ್ವಹಣಾ ವಿಭಾಗ.
18. ಸಹಾಯಕ ಕಂದಾಯ ಅಧಿಕಾರಿ ಅಂಜನಾಪುರ ವಿಭಾಗ.
19. ಕಲ್ಯಾಣಾಧಿಕಾರಿಗಳು ಬೊಮ್ಮನಹಳ್ಳಿ ವಲಯ.
20. ಉಪವಲಯ ಅರಣ್ಯ ಸಂರಕ್ಷಣಾಧಿಕಾರಿಗಳು, ಬೊಮ್ಮನಹಳ್ಳಿ ವಲಯ.
21. ಪೋಲೀಸ್ ಇನ್ಸ್‌ಪೆಕ್ಟರ್, ಹುಳಿಮಾವು ಮತ್ತು ಕೋಣನಕುಂಟೆ ಪೋಲೀಸ್ ಠಾಣೆ.
22. ಕಂದಾಯ ಅಧಿಕಾರಿಗಳು, ಅಂಜನಾಪುರ ಉಪ ವಲಯ.
23. ಸ್ಥಳೀಯ ನಾಗರಿಕ ಕಲ್ಯಾಣ ಸಂಸ್ಥೆಗಳು.

Scanned by CamScanner